ದಿನಾಂಕಃ 02.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರಿದ ಪಾಟೀ ಸವಾಲುಃ 4 ನೇ ಪ್ರತಿವಾದಿಪರ ವಕೀಲರಿಂದಃ**

1) ಅಸಲು ದಾವೆ ಸಂ.42/2022 ರ ದಾವೆ ಚಾಲ್ತಿಯಲ್ಲಿರುವ ಬಗ್ಗೆ ಅಥವಾ ಮುಕ್ತಾಯವಾಗಿರುವ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಸದರಿ ದಾವೆ ವಜಾ ಆಗಿರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. 4 ನೇ ಪ್ರತಿವಾದಿಯವರು ನನ್ನ ವಿರುದ್ಧ ಹೆಚ್ಚುವರಿ ಸಿವಿಲ್ ನ್ಯಾಯಾಲಯದಲ್ಲಿ ಅಸಲು ದಾವೆ ಸಂ.60/2021 ರಂತೆ ದಾವೆ ದಾಖಲು ಮಾಡಿದ್ದಾರೆ ಎಂದರೆ ಸರಿ. ಸದರಿ ದಾವೆ ದಾಖಲಾದ ನಂತರ ಅಸಲು ದಾವೆ ಸಂ.42/2022 ಸಲ್ಲಿಸಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಿಶಾನೆ ಪಿ 26 ಖಾಸಗಿ ದೂರಿನಂತೆ ತನಿಖಾಧಿಕಾರಿಗಳು ತನಿಖೆಯನ್ನು ಮಾಡಿ ಬಿ ಅಂತಿಮ ವರದಿ ಸಲ್ಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ಅಕ್ರಮ ಲಾಭ ಪಡೆಯುವ ಸಲುವಾಗಿ ನಿಶಾನೆ ಪಿ 26 ರಿಂದ 29 ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

(ಅರವಿಂದ್ರ ಬಿ.ಸಿ.)

ಹಿರಿಯ ಸಿವಿಲ್ ನ್ಯಾಯಾಧೀಶರು

ಮತ್ತು ಪ್ರದನ್ಯಾದಂ., ಕೆ.ಆರ್.ನಗರ